ಮೊರಾರ್ಜಿ ವಸತಿ ಶಾಲೆ

430(1063); ಡಾ॥ ಕೆ. ಶ್ರೀನಿವಾಸಮೂರ್ತಿ (ನೆಲಮಂಗಲ)

ಅ) 2013–14 ಮತ್ತು 2014–15ನೇ ಸಾಲಿನಲ್ಲಿ ನೆಲಮಂಗಲ ವಿಧಾನ ಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸೋಂಪುರ ಹೋಬಳಿ ಶಿವಗಂಗೆ ಮತ್ತು ತ್ಯಾಮಗೊಂಡ್ಲು ಹೋಬಳಿ ಭೈರನಾಯ್ಕನಹಳ್ಳಿ ಪೈಕಿ ಎರಡು ಗ್ರಾಮಗಳಿಗೆ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಮೊರಾರ್ಜಿ ದೇಸಾಯಿ ವಸತಿ ಶಾಲೆ ಮಂಜೂರಾತಿಗಾಗಿ ಸರ್ಕಾರಕ್ಕೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಿರುವುದು ನಿಜವೇ;

ಇ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಮೇಲ್ಕಂಡ ಗ್ರಾಮಗಳಿಗೆ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಮಂಜೂರಾತಿ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ; (ಸಂಪೂರ್ಣ ಮಾಹಿತಿ ನೀಡುವುದು)

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ಹೌದು

ಆ) ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ವಸತಿ ಶಾಲೆಗಳನ್ನು ಪ್ರಾರಂಭಿಸಲು, ವಿದ್ಯಾರ್ಥಿಗಳ ಲಭ್ಯತೆ, ಸೂಕ್ತ ಬಾಡಿಗೆ ಕಟ್ಟಡ ಹಾಗೂ ಶಾಲಾ ಸಂಕೀರ್ಣಗಳನ್ನು ನಿರ್ಮಾಣ ಮಾಡಲು ಜಮೀನು ಮಂಜೂರಾತಿ ಇತ್ಯಾದಿ ವಿವರಗಳನ್ನು ಪರಿಶೀಲಿಸಿ, ಅನುದಾನದ ಲಭ್ಯತೆಗನುಗುಣವಾಗಿ ಪ್ರಾರಂಭಿಸಲು ಕ್ರಮ ವಹಿಸಲಾಗುವುದು.